# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 574 |
| ಮಾನ್ಯ ಸದಸ್ಯರ ಹೆಸರು | ಶ್ರೀ ಟಿ. ಎನ್. ಜವರಾಯಿಗೌಡ<br>(ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 13/12/2024 |
| ಉತ್ತರಿಸುವ ಸಚಿವರು | ಮಾನ್ಯ ಕಾರ್ಮಿಕ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಕರ್ನಾಟಕ ರಾಜ್ಯ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕ ಕಲ್ಯಾಣ ಮಂಡಳಿಯು ಯಾವಾಗಿನಿಂದ ಅಸ್ತಿತ್ವಕ್ಕೆ ಬಂದಿದೆ. ಇದರ ಧ್ಯೇಯೋದ್ದೇಶಗಳೇನು; (ವಿವರ ನೀಡುವುದು) | ಕರ್ನಾಟಕ ರಾಜ್ಯ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕ ಕಲ್ಯಾಣ ಮಂಡಳಿಯು ದಿನಾಂಕ: 18-01-2007 ರಂದು ಜಾರಿಗೆ ಬಂದಿರುತ್ತದೆ.<br><br>ಮಂಡಳಿಯು ಈ ಕೆಳಕಂಡ ಧ್ಯೇಯೋದ್ದೇಶಗಳನ್ನು ಹೊಂದಿರುತ್ತದೆ.<br>• ಕಟ್ಟಡ ಮತ್ತು ಇತರೆ ನಿರ್ಮಾಣ ಕಾಮಗಾರಿಗಳಲ್ಲಿ ಕೆಲಸ ನಿರ್ವಹಿಸುವ ನಿರ್ಮಾಣ ಕಾರ್ಮಿಕರನ್ನು ಫಲಾನುಭವಿಗಳೆಂದು ನೋಂದಾಯಿ ಸುವುದು.<br>• ಸರ್ಕಾರಿ ಕ್ಷೇತ್ರ ಮತ್ತು ಖಾಸಗಿ ಕ್ಷೇತ್ರಗಳಲ್ಲಿ ಕೈಗೊಳ್ಳುವ ಕಾಮಗಾರಿಗಳ ವೆಚ್ಚದ ಮೇಲೆ ಶೇ.1 ರಷ್ಟು ಸುಂಕವನ್ನು ಸಂಗ್ರಹಿಸುವುದು.<br>• ನೋಂದಾಯಿತ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರು ಮತ್ತು ಅವರ ಅವಲಂಭಿತರಿಗೆ ಕಲ್ಯಾಣ ಮತ್ತು ಸಾಮಾಜಿಕ ಭದ್ರತಾ ಸೌಲಭ್ಯಗಳನ್ನು ರೂಪಿಸುವುದು ಮತ್ತು ಒದಗಿಸುವುದು. |
| ಆ) | ಈ ಮಂಡಳಿ ವತಿಯಿಂದ ಕಟ್ಟಡ ನಿರ್ಮಾಣ ಕಾರ್ಮಿಕರಿಗೆ ಸಿಗುವ ಸೌಲಭ್ಯಗಳೇನು; (ಮಾಹಿತಿ ಒದಗಿಸುವುದು) | ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯ ನೋಂದಾಯಿತ ಫಲಾನುಭವಿಗಳಿಗೆ ಹಾಗೂ ಅವರ ಅವಲಂಭಿತರಿಗಾಗಿ ರೂಪಿಸಿರುವ ಕಲ್ಯಾಣ ಮತ್ತು ಸಾಮಾಜಿಕ ಭದ್ರತಾ ಸೌಲಭ್ಯಗಳ ವಿವರವನ್ನು **ಅನುಬಂಧ-01** ರಲ್ಲಿ ಲಗತ್ತಿಸಿದೆ. |
| ಇ) | ಈ ಮಂಡಳಿಯಲ್ಲಿ ಇದುವರೆವಿಗೂ ಸಂಗ್ರಹಿಸಿರುವ ಮೊತ್ತವೆಷ್ಟು; ಈ ಹಣವನ್ನು ಯಾವ ಯಾವ ಬ್ಯಾಂಕಿನಲ್ಲಿ ಜಮಾ ಮಾಡಲಾಗಿದೆ; (ವಿವರ ನೀಡುವುದು) | ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯ ಸುಂಕ ನಿಧಿಯಲ್ಲಿ ರೂ.16,187.00 ಕೋಟಿಗಳಷ್ಟು (ಸುಂಕ, ನೋಂದಣಿ/ ನವೀಕರಣ, ಬಡ್ಡಿ ಮತ್ತು ಇತರೆ ಸೇರಿದಂತೆ) ಹಣ ಸಂಗ್ರಹವಾಗಿರುತ್ತದೆ.<br><br>ಮಂಡಳಿಯಲ್ಲಿ ಸಂಗ್ರಹವಾದ ನಿಧಿಯನ್ನು ಈ ಕೆಳಕಂಡ ಬ್ಯಾಂಕಿನಲ್ಲಿ ಠೇವಣಿ/ ಉಳಿತಾಯ ಖಾತೆಯಲ್ಲಿ ಇಡಲಾಗಿದೆ. |

<table>
<tr>
<td></td>
<td></td>
<td>
(ರೂ. ಕೋಟಿಗಳಲ್ಲಿ)
<table>
<tr><th>ಕ್ರ. ಸಂ</th><th>ಬ್ಯಾಂಕ್ ಹೆಸರು</th><th>ಠೇವಣಿ</th><th>ಉಳಿತಾಯ</th></tr>
<tr><td>1</td><td>Union Bank of India</td><td>1,950</td><td>-</td></tr>
<tr><td>2</td><td>Bank Of Baroda</td><td>900</td><td>-</td></tr>
<tr><td>3</td><td>State Bank of India</td><td>4,650</td><td>84</td></tr>
<tr><td>4</td><td>Canara Bank</td><td>-</td><td>377</td></tr>
<tr><td colspan="2">ಒಟ್ಟು</td><td>7,500</td><td>461</td></tr>
</table>
ಉಳಿದ ಮೊತ್ತವನ್ನು ಮಂಡಳಿಯ ಫಲಾನುಭವಿಗಳಿಗೆ ವಿವಿಧ ಕಲ್ಯಾಣ ಮತ್ತು ಸಾಮಾಜಿಕ ಭದ್ರತಾ ಸೌಲಭ್ಯಗಳನ್ನು ವಿತರಿಸಲು ಹಾಗೂ ಆಡಳಿತಾತ್ಮಕ ವೆಚ್ಚಕ್ಕಾಗಿ ಖರ್ಚು ಮಾಡಲಾಗಿದೆ.
</td>
</tr>
<tr>
<td>ಈ)</td>
<td>ಕಟ್ಟಡ ಕಾರ್ಮಿಕ ನಿರ್ಮಾಣ ಮಂಡಳಿಯ ನಿಧಿ ದುರುಪಯೋಗವಾಗಿರುವ ಬಗ್ಗೆ ಇತ್ತೀಚಿಗೆ ಪತ್ರಿಕೆಯಲ್ಲಿ ವರದಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ನಿಧಿ ದುರುಪಯೋಗ ಮಾಡಿಕೊಂಡಿರುವ ಅಧಿಕಾರಿ/ನೌಕರರ ಮೇಲೆ ತೆಗೆದುಕೊಂಡಿರುವ ಕ್ರಮಗಳೇನು? (ವಿವರ ನೀಡುವುದು)</td>
<td>
ಮಂಡಳಿಯ ಎಲ್ಲಾ ಯೋಜನೆಗಳನ್ನು ಮಂಡಳಿಯ ಸಭೆಯ ತೀರ್ಮಾನ ಹಾಗೂ ಅವಶ್ಯವಿದ್ದಲ್ಲಿ ಸರ್ಕಾರದ ಅನುಮೋದನೆ ಪಡೆದು, ಅನುಷ್ಠಾನ ಮಾಡಲಾಗುತ್ತಿದ್ದು, ಕಾರ್ಮಿಕರ ನಿಧಿಯ ದುರುಪಯೋಗವಾಗುತ್ತಿರುವುದಿಲ್ಲ.
ಮಂಡಳಿಗೆ ಸಂಬಂಧಿಸಿದಂತೆ ಬಂದಿರುವ ವರದಿಗಳಿಗೆ ಸೂಕ್ತ ಸಮಾಜಾಯಿಷಿ ಮತ್ತು ಪ್ರತಿಕ್ರಿಯೆಯನ್ನು ಸಂಬಂಧಪಟ್ಟ ಪತ್ರಿಕೆಗೆ ನೀಡಲಾಗಿರುತ್ತದೆ.
ಬಾಗಲಕೋಟೆ ಜಿಲ್ಲೆಯಲ್ಲಿ ಹೊರಗುತ್ತಿಗೆ ಸಿಬ್ಬಂದಿಯು ಮಂಡಳಿಯ ನಿಧಿಯನ್ನು ದುರುಪಯೋಗಪಡಿಸಿಕೊಂಡಿದ್ದು, ಈ ಬಗ್ಗೆ ಈಗಾಗಲೇ ಬಾಗಲಕೋಟೆಯ CEN ಪೊಲೀಸ್ ಠಾಣೆಯಲ್ಲಿ ಅಪರಾಧ ಪ್ರಕರಣ ಸಂಖ್ಯೆ 0008/2024, ದಿನಾಂಕ: 29-02-2024 ರಂದು ದಾಖಲಾಗಿದ್ದು, ವಿಚಾರಣೆ ನಡೆಯುತ್ತಿದೆ. ಈ ಅವಧಿಯಲ್ಲಿ ಸದರಿ ಕಛೇರಿಯಲ್ಲಿ ಕೆಲಸ ನಿರ್ವಹಿಸುತ್ತಿದ್ದ ಇಬ್ಬರು ಕಾರ್ಮಿಕ ಅಧಿಕಾರಿಗಳನ್ನು ಕೂಡ ವಿಚಾರಣೆಯನ್ನು ಕಾಯ್ದಿರಿಸಿ ಅಮಾನತ್ತು ಮಾಡಲಾಗಿರುತ್ತದೆ.
</td>
</tr>
<tr>
<td>ಉ)</td>
<td>ಕಟ್ಟಡ ನಿರ್ಮಾಣ ಕಾರ್ಮಿಕರ ಮಕ್ಕಳ ಶೈಕ್ಷಣಿಕ ಸಹಾಯಧನ ತಡೆಹಿಡಿದಿರುವುದನ್ನು ಖಂಡಿಸಿ ಕಟ್ಟಡ ಕಾರ್ಮಿಕ ಸಂಘಟನೆಗಳು ಪ್ರತಿಭಟಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಸರ್ಕಾರ ತೆಗೆದುಕೊಂಡಿರುವ ಕ್ರಮಗಳ ಬಗ್ಗೆ ವಿವರಕ್ಕೆ ನೀಡುವುದು;</td>
<td>2022-23ನೇ ಸಾಲಿನ ಶೈಕ್ಷಣಿಕ ಧನ ಸಹಾಯವನ್ನು ಬಿಡುಗಡೆ ಮಾಡಲು ಮಂಡಳಿಯು ಶೈಕ್ಷಣಿಕ ಧನ ಸಹಾಯದ ದರಗಳನ್ನು ಪರಿಷ್ಕರಿಸಿದ್ದು, ಈ ಬಗ್ಗೆ ಹಲವಾರು ಕಾರ್ಮಿಕ ಸಂಘಟನೆಗಳು ಸರ್ಕಾರಕ್ಕೆ ಹಾಗೂ ಮಂಡಳಿಗೆ ಮನವಿಗಳನ್ನು ಸಲ್ಲಿಸಿರುತ್ತಾರೆ.</td>
</tr>
</table>

**ಕಾಇ 558 ಎಲ್ ಇಟಿ 2024**

**(ಸಂತೋಷ್ ಎಸ್. ಲಾಡ್)**

**ಕಾರ್ಮಿಕ ಸಚಿವರು**

# <u>ಅನುಬಂಧ</u>

ಮಾನ್ಯ ವಿಧಾನ ಸಭೆಯ ಸದಸ್ಯರಾದ **ಶ್ರೀ ಟಿ. ಎನ್. ಜವರಾಯಿಗೌಡ (ವಿಧಾನಸಭೆಯಿಂದ ಚುನಾಯಿತರಾದವರು)** ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: **574**

**ಮಂಡಳಿಯ ವತಿಯಿಂದ ನೊಂದಾಯಿತ ಫಲಾನುಭವಿಗಳಿಗೆ ಮತ್ತು ಅವರ ಅವಲಂಭಿತರಿಗೆ ಈ ಕೆಳಕಂಡ ವಿವಿಧ ಕಲ್ಯಾಣ ಮತ್ತು ಸಾಮಾಜಿಕ ಭದ್ರತಾ ಸೌಲಭ್ಯಗಳನ್ನು ರೂಪಿಸಲಾಗಿದೆ:**

1. **ಪಿಂಚಣಿ ಸೌಲಭ್ಯ: ಮೂರು ವರ್ಷ ಸದಸ್ಯತ್ವದೊಂದಿಗೆ 60 ವರ್ಷ ಪೂರೈಸಿದ ಫಲಾನುಭವಿಗೆ ಮಾಸಿಕ ರೂ. 3,000/-**
2. **ಕುಟುಂಬ ಪಿಂಚಣಿ ಸೌಲಭ್ಯ:** ಮೃತ ಪಿಂಚಣಿದಾರರ ಪತಿ/ಪತ್ನಿಗೆ ಮಾಸಿಕ **ರೂ.1500/-**
3. **ದುರ್ಬಲತೆ ಪಿಂಚಣಿ:** ನೋಂದಾಯಿತ ಫಲಾನುಭವಿಯು ಖಾಯಿಲೆಗಳಿಂದ ಅಥವಾ ಕಟ್ಟಡ ಕಾಮಗಾರಿಗಳ ಅಪಘಾತದಿಂದ ಶಾಶ್ವತ /ಭಾಗಶಃ ಅಂಗ ವಿಕಲತೆ ಹೊಂದಿದ್ದರೆ ಮಾಸಿಕ **ರೂ. 2,000/-** ಪಿಂಚಣಿ ಹಾಗೂ ಶೇಕಡವಾರು ದುರ್ಬಲತೆಯನ್ನಾಧರಿಸಿ **ರೂ. 2,00,000/-** ದವರೆಗೆ ಅನುಗ್ರಹರಾಶಿ ಸಹಾಯಧನ.
4. **ಕನ್ನಡಕ, ಶ್ರವಣಯಂತ್ರ, ಕೃತಕ ಕೈಕಾಲು ಮತ್ತು ಗಾಲಿ ಕುರ್ಚಿ** ಮರುಪಾವತಿ ಸೌಲಭ್ಯ (ಈ ಯೋಜನೆಯನ್ನು ಜಾರಿಗೊಳಿಸಲು ಕ್ರಮ ಕೈಗೊಳ್ಳಲಾಗುತ್ತಿದೆ)
5. **ಟ್ರೈನಿಂಗ್-ಕಮ್-ಟೂಲ್‌ಕಿಟ್ಸ್ ಸೌಲಭ್ಯ (ಶ್ರಮ ಸಾಮರ್ಥ್ಯ): ರೂ. 20,000/- ವರೆಗೆ**
6. **ವಸತಿ ಸೌಲಭ್ಯ (ಕಾರ್ಮಿಕ ಗೃಹಭಾಗ್ಯ): ರೂ.2,00,000/-** ದವರೆಗೆ ಮುಂಗಡ ಸೌಲಭ್ಯ
7. **ಹೆರಿಗೆ ಸೌಲಭ್ಯ (ತಾಯಿ ಲಕ್ಷ್ಮೀಬಾಂಡ್):** ಮಹಿಳಾ ಫಲಾನುಭವಿಯ ಮೊದಲ ಎರಡು ಮಗುವಿನ ಜನನಕ್ಕೆ ರೂ. 50,000/-
8. **ಅಂತ್ಯಕ್ರಿಯೆ ವೆಚ್ಚ :ರೂ. 4,000/-** ಹಾಗೂ ಅನುಗ್ರಹ ರಾಶಿ **ರೂ. 71,000/-** ಸಹಾಯಧನ
9. ಶೈಕ್ಷಣಿಕ ಸಹಾಯಧನ (ಕಲಿಕೆ ಭಾಗ್ಯ): ಫಲಾನುಭವಿಯ ಇಬ್ಬರು ಮಕ್ಕಳ ವಿದ್ಯಾಭ್ಯಾಸಕ್ಕಾಗಿ:

| **ಕ್ರ ಸಂ** | **ವಿದ್ಯಾಭ್ಯಾಸದ ವಿವರ (ತರಗತಿ ಅಥವಾ ಕೋರ್ಸ್ ಅಥವಾ ಗ್ರೇಡ್)** | **ವಾರ್ಷಿಕ ಶೈಕ್ಷಣಿಕ ಸಹಾಯಧನ ಮೊತ್ತ (ರೂ. ಗಳಲ್ಲಿ)** |
|---|---|---|
| 1 | 1 ರಿಂದ 5 ನೇ ತರಗತಿ | 1,800 |
| 2 | 6 ರಿಂದ 8 ನೇ ತರಗತಿ | 2,400 |
| 3 | 9 ಹಾಗೂ 10ನೇ ತರಗತಿ | 3,000 |
| 4 | ಪ್ರಥಮ ಪಿಯುಸಿ ಮತ್ತು ದ್ವಿತೀಯ ಪಿ.ಯು.ಸಿ | 4,600 |
| 5 | ಪದವಿ | 10,000 |
| 6 | ಬಿಇ / ಬಿ.ಟೆಕ್ ಅಥವಾ ಸಂಬಂಧಪಟ್ಟ ಯೂಜಿ ಕೋರ್ಸ್ | 10,000 |
| 7 | ಸ್ನಾತಕೋತ್ತರ ಪದವಿ | 10,000 |
| 8 | ಪಾಲಿಟೆಕ್ನಿಕ್ / ಡಿಪ್ಲಮಾ/ ಐಟಿಐ | 4,600 |
| 9 | ಬಿಎಸ್‌ಸಿ ನರ್ಸಿಂಗ್/ ಜಿಎನ್‌ಎಮ್/ ಎಎನ್‌ಎಮ್/ ಪ್ಯಾರಮೆಡಿಕಲ್ ಕೋರ್ಸ್ / ಅಕ್ಸುಲರಿ ನರ್ಸಿಂಗ್ ಆಂಡ್ ಮಿಡ್ವೈಫ್ | 10,000 |
| 10 | ಬಿ.ಎಡ್ | 6,000 |
| 11 | ವೈದ್ಯಕೀಯ (ಎಮ್‌ಬಿಬಿಎಸ್ /ಬಿಎಎಮ್ ಎಸ್/ ಬಿಡಿಎಸ್ /ಬಿಹೆಚ್‌ಎಮ್ ಎಸ್ ಕೋರ್ಸ್ ಅಥವಾ ಇದಕ್ಕೆ ಸಂಬಂಧಪಟ್ಟ ಸಮಾನಾಂತರ ಸ್ನಾತಕೋತ್ತರ ಕೋರ್ಸ್ | 11,000 |

| ಕ್ರ ಸಂ | ವಿದ್ಯಾಭ್ಯಾಸದ ವಿವರ (ತರಗತಿ ಅಥವಾ ಕೋರ್ಸ್ ಅಥವಾ ಗ್ರೇಡ್) | ವಾರ್ಷಿಕ ಶೈಕ್ಷಣಿಕ ಸಹಾಯಧನ ಮೊತ್ತ (ರೂ. ಗಳಲ್ಲಿ) |
|---|---|---|
| 12 | ಎಲ್ಎಲ್ ಬಿ/ಎಲ್ ಎಲ್ ಎಂ | 10,000 |
| 13 | ಎಮ್.ಟೆಕ್/ ಎಮ್ ಇ (ಇದಕ್ಕೆ ಸಂಬಂಧಪಟ್ಟ ಸಮಾನಾಂತರ ಸ್ನಾತಕೋತ್ತರ ಕೋರ್ಸ್) | 10,000 |
| 14 | ಎಮ್ಡಿ ಮೆಡಿಕಲ್ | 12,000 |
| 15 | ಪಿಹೆಚ್ಡಿ / ಎಮ್. ಫಿಲ್ ಯಾವುದೇ ವಿಷಯ) | 11,000 |
| 16 | ಐಐಟಿ/ಐಐಐಟಿ/ ಐಐಎಮ್/ ಎನ್ಐಟಿ/ ಐಐಎಸ್ಇಆರ್/ಎಐಐಎಮ್ಎಸ್/ಎನ್ಎಲ್ಯೂ ಮತ್ತು ಭಾರತ ಸರ್ಕಾರದ ಮಾನ್ಯತೆ ಪಡೆದ ಕೋರ್ಸುಗಳು. | 11,000 |

10. **ವೈದ್ಯಕೀಯ ಸಹಾಯ ಧನ (ಕಾರ್ಮಿಕ ಆರೋಗ್ಯ ಭಾಗ್ಯ):** ನೋಂದಾಯಿತ ಫಲಾನುಭವಿ ಹಾಗೂ ಅವರ ಅವಲಂಭಿತರಿಗೆ **ರೂ. 300/- ರಿಂದ ರೂ. 20,000/-**ವರೆಗೆ

11. **ಅಪಘಾತ ಪರಿಹಾರ:** ನೊಂದಾಯಿತ ಕಟ್ಟಡ ಕಾರ್ಮಿಕರುಮರಣ ಹೊಂದಿದ್ದಲ್ಲಿ **ರೂ. 5,00,000/-**ಸಂಪೂರ್ಣ ಶಾಶ್ವತ ದುರ್ಬಲತೆಯಾದಲ್ಲಿ **ರೂ. 2,00,000/-**

12. **ಪ್ರಮುಖ ವೈದ್ಯಕೀಯ ವೆಚ್ಚ ಸಹಾಯಧನ (ಕಾರ್ಮಿಕ ಚಿಕಿತ್ಸಾ ಭಾಗ್ಯ):** ಹೃದ್ರೋಗ, ಕಿಡ್ನಿ ಜೋಡಣೆ, ಕ್ಯಾನ್ಸರ್ ಚಿಕಿತ್ಸೆ, ಕಣ್ಣಿನ ಶಸ್ತ್ರಚಿಕಿತ್ಸೆ, ಪಾರ್ಶ್ವವಾಯು, ಮೂಳೆ ಶಸ್ತ್ರಚಿಕಿತ್ಸೆ, ಗರ್ಭಕೋಶ ಶಸ್ತ್ರಚಿಕಿತ್ಸೆ, ಅಸ್ತಮಚಿಕಿತ್ಸೆ, ಗರ್ಭಪಾತ ಪ್ರಕರಣಗಳು, ಪಿತ್ತಕೋಶದ ತೊಂದರೆಗೆ ಸಂಬಂಧಿತ ಚಿಕಿತ್ಸೆ, ಮೂತ್ರಪಿಂಡದಲ್ಲಿನ ಕಲ್ಲುತೆಗೆಯುವ ಚಿಕಿತ್ಸೆ, ಮೆದುಳಿನ ರಕ್ತಸ್ರಾವದ ಚಿಕಿತ್ಸೆ, ಅಲ್ಸರ್ ಚಿಕಿತ್ಸೆ, ಡಯಾಲಿಸಿಸ್ ಚಿಕಿತ್ಸೆ , ಕಿಡ್ನಿಶಸ್ತ್ರ ಚಿಕಿತ್ಸೆ, ಇ.ಎನ್.ಟಿ ಚಿಕಿತ್ಸೆ, ಶಸ್ತ್ರ ಚಿಕಿತ್ಸೆ, ನರರೋಗ ಶಸ್ತ್ರಚಿಕಿತ್ಸೆ, ವ್ಯಾಸ್ಕುಲರ್ ಶಸ್ತ್ರಚಿಕಿತ್ಸೆ, ಅನ್ನನಾಳದ ಚಿಕಿತ್ಸೆ ಮತ್ತು ಶಸ್ತ್ರ ಚಿಕಿತ್ಸೆ, ಕರುಳಿನ ಶಸ್ತ್ರಚಿಕಿತ್ಸೆ, ಸ್ತನ ಸಂಬಂಧಿತ ಚಿಕಿತ್ಸೆ ಮತ್ತು ಶಸ್ತ್ರಚಿಕಿತ್ಸೆ, ಹರ್ನಿಯ ಶಸ್ತ್ರಚಿಕಿತ್ಸೆ, ಅಪೆಂಡಿಕ್ಸ್ ಶಸ್ತ್ರಚಿಕಿತ್ಸೆ, ಮೂಳೆಮುರಿತ/ ಡಿಸ್‌ಲೊಕೇಶನ್ ಚಿಕಿತ್ಸೆ, ಇತರೆ ಔದ್ಯೋಗಿಕ ಖಾಯಿಲೆಗಳ ಚಿಕಿತ್ಸೆಗಳಿಗೆ **ರೂ.2,00,000/-ವರೆಗೆ**

13. **ಮದುವೆ ಸಹಾಯ ಧನ (ಗೃಹ ಲಕ್ಷ್ಮೀ ಬಾಂಡ್):** ಫಲಾನುಭವಿ ಅಥವಾ ಅವರ ಇಬ್ಬರು ಮಕ್ಕಳ ಮದುವೆಗೆ **ತಲಾ ರೂ.60,000/-**

14. **ತಾಯಿ ಮಗು ಸಹಾಯ ಹಸ್ತ:** ಮಹಿಳಾ ಫಲಾನುಭವಿಯು ಮಗುವಿಗೆ ಜನ್ಮ ನೀಡಿದ ಸಂದರ್ಭದಲ್ಲಿ ಆಕೆಯ ಮಗುವಿನ ಶಾಲಾ ಪೂರ್ವಶಿಕ್ಷಣ ಮತ್ತು ಪೌಷ್ಠಿಕತೆಗಾಗಿ ಮಗುವಿಗೆ ಮೂರು ವರ್ಷಗಳು ತುಂಬುವವರೆಗೆ ವಾರ್ಷಿಕ **ರೂ. 6,000/- ಗಳ** ಸಹಾಯಧನ